ಕರ್ನಾಟಕ ಸರ್ಕಾರ

**ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು**

ಸಂಖ್ಯೆ : ಸಿ5(2)ಬಡ್ತಿ–25/2012–13 ದಿನಾಂಕ : 05–11–2013

***ಅಧಿಸೂಚನೆ***

ವಿಷಯ :– ಸಾರ್ವಜನಿಕ ಶಿಕ್ಷಣ ಇಲಾಖೆಯ ಅಧೀಕ್ಷಕರುಗಳಿಗೆ ಸಹಾಯಕ ನಿರ್ದೇಶಕರು / ಪತ್ರಾಂಕಿತ ವ್ಯವಸ್ಥಾಪಕರ ಹುದ್ದೆಗೆ ಪದೋನ್ನತಿ ನೀಡುವ ಕುರಿತು.

ಉಲ್ಲೇಖ :– ಸರ್ಕಾರದ ಆದೇಶ ಸಂಖ್ಯೆ : ಡಿಪಿಎಆರ್ 12 ಎಸ್‌ಡಿಇ 2005 ದ: 29–01–2008.

2 :– ಸರ್ಕಾರದ ಆದೇಶ ಸಂಖ್ಯೆ : ಇಡಿ 464 ಡಿಪ್ಯೆ 2008 ದಿ : 06–01–2009.

3 :– ದಿನಾಂಕ : 17–08–2013 ರಂದು ನಡೆದ ಇಲಾಖಾ ಮುಂಬಡ್ತಿ ಸಮಿತಿಯ ಸಭಾ ನಡವಳಿಗಳು.

4:– ದಿನಾಂಕ: 30–09–2013 ರಂದು ನಡೆದ ಸ್ಥಳ ಆಯ್ಕೆ ಪ್ರಕ್ರಿಯೆಯಲ್ಲಿ ಅರ್ಹ ಅಧೀಕ್ಷಕರು ಭಾಗವಹಿಸಿ, ಸ್ಥಳ ಆಯ್ಕೆ ಮಾಡಿಕೊಂಡಿರುವಂತೆ.

* * * * * *

**ಪ್ರಸ್ತಾವನೆ :**

ಸಾರ್ವಜನಿಕ ಶಿಕ್ಷಣ ಇಲಾಖೆಯ ಬೆಂಗಳೂರು ಆಯುಕ್ತಾಲಯದ ಆಡಳಿತ ವ್ಯಾಪ್ತಿಯಲ್ಲಿ ಬರುವ ಗ್ರೂಪ್ 'ಬಿ' ವೃಂದದ ಪತ್ರಾಂಕಿತ ವ್ಯವಸ್ಥಾಪಕರ / ಸಹಾಯಕ ನಿರ್ದೇಶಕರು(ಭೋದಕೇತರ) ವೃಂದಕ್ಕೆ ಉಲ್ಲೇಖಿತ (1) ರ ಸರ್ಕಾರದ ಆದೇಶದಲ್ಲಿ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ರವರನ್ನು ನೇಮಕಾತಿ ಪ್ರಾಧಿಕಾರಿಯನ್ನಾಗಿ ನೇಮಿಸಿ ಆದೇಶಿಸಲಾಗಿದೆ.

ಗ್ರೂಪ್ 'ಬಿ' ವೃಂದದ ಹುದ್ದೆಗಳಿಗೆ ಬಡ್ತಿಯನ್ನು ನೀಡುವ ಸಲುವಾಗಿ ಆಯುಕ್ತಾಲಯವಾರು ಇಲಾಖಾ ಮುಂಬಡ್ತಿ ಸಮಿತಿಯನ್ನು ಉಲ್ಲೇಖಿತ (2) ರ ಸರ್ಕಾರದ ಆದೇಶದಲ್ಲಿ ರಚಿಸಿ ಆದೇಶಿಸಲಾಗಿದೆ. ಅದರಂತೆ ಬೆಂಗಳೂರು ಆಯುಕ್ತಾಲಯದ ಆಡಳಿತ ವ್ಯಾಪ್ತಿಯಲ್ಲಿ ಬರುವ ಪತ್ರಾಂಕಿತ ವ್ಯವಸ್ಥಾಪಕರ / ಸಹಾಯಕ ನಿರ್ದೇಶಕರು(ಭೋದಕೇತರ) ಹುದ್ದೆಯಲ್ಲಿ ಪ್ರಸ್ತುತ ಖಾಲಿ ಇರುವ ಹುದ್ದೆಗಳಿಗೆ ಅಧೀಕ್ಷಕರ ಹುದ್ದೆಯಿಂದ ವೃಂದ ಮತ್ತು ನೇಮಕಾತಿ ನಿಯಮಾವಳಿಗಳಂತೆ ಸ್ಥಾನಪನ್ನ ಬಡ್ತಿಯನ್ನು ನೀಡುವ ಸಲುವಾಗಿ ದಿನಾಂಕ : 17–08–2013 ರಂದು ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಅಧ್ಯಕ್ಷತೆಯಲ್ಲಿ ಇಲಾಖಾ ಮುಂಬಡ್ತಿಯ ಸಭೆಯನ್ನು ನಡೆಸಲಾಯಿತು. ಸದರಿ ಸಭೆಯಲ್ಲಿ ದಿನಾಂಕ : 31–12–2013 ರ ಅಂತ್ಯಕ್ಕೆ ಖಾಲಿ ಆಗುವ ಹುದ್ದೆಗಳಿಗೆ ಸ್ಥಾನಪನ್ನ ಬಡ್ತಿಯನ್ನು ನೀಡಲು ನಿರ್ಧರಿಸಲಾಯಿತು.

ಬಡ್ತಿಗಾಗಿ ಅರ್ಹರಿರುವ ಅಧೀಕ್ಷಕರುಗಳಿಗೆ ಅವರೇ ಸ್ವತ: ಸ್ಥಳಗಳನ್ನು ಆಯ್ಕೆ ಮಾಡಿಕೊಳ್ಳುವ ಸಲುವಾಗಿ ದಿನಾಂಕ : 30–09–2013 ರಂದು ಸ್ಥಳ ಆಯ್ಕೆ ಪ್ರಕ್ರಿಯೆಯನ್ನು ನಡೆಸಲಾಗಿ ಅರ್ಹ ನೌಕರರು ಸ್ಥಳಗಳನ್ನು ಆಯ್ಕೆ ಮಾಡಿಕೊಂಡಿದ್ದು, ಅವರುಗಳಿಗೆ ಸ್ಥಾನಪನ್ನ ಬಡ್ತಿಯನ್ನು ನೀಡುವ ಸಲುವಾಗಿ ಈ ಕೆಳಕಂಡ ಆದೇಶ.

**ಆದೇಶ :–**

ಸಾರ್ವಜನಿಕ ಶಿಕ್ಷಣ ಇಲಾಖೆಯ ಗ್ರೂಪ್ 'ಸಿ' ವೃಂದದ ವೇತನ ಶ್ರೇಣಿ ರೂ. 20000–36300 ರಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಈ ಕೆಳಕಂಡ ಅಧೀಕ್ಷಕರುಗಳಿಗೆ ಗ್ರೂಪ್ 'ಬಿ' ವೃಂದದ ವೇತನ ಶ್ರೇಣಿ ರೂ.

21600–40050 ರ ಪತ್ರಾಂಕಿತ ವ್ಯವಸ್ಥಾಕರು / ಸಹಾಯಕ ನಿರ್ದೇಶಕರು(ಬೋಧಕೇತರ) ಹುದ್ದೆಗಳಿಗೆ ಸ್ಥಾನಪನ್ನ ಬಡ್ತಿಯನ್ನು ನೀಡಿ ಅವರುಗಳ ಹೆಸರಿನ ಮುಂದೆ ಸೂಚಿಸಲಾಗಿರುವ ಹುದ್ದೆ ಮತ್ತು ಸ್ಥಳಗಳಿಗೆ ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶವಾಗುವವರೆಗೆ ಸ್ಥಳ ನಿಯುಕ್ತಿಗೊಳಿಸಿ ಆದೇಶಿಸಲಾಗಿದೆ.

| ಕ್ರಮ ಸಂಖ್ಯೆ | ಜೇಷ್ಠತಾ ಸಂಖ್ಯೆ | ಅಧೀಕ್ಷಕರ ಹೆಸರು ಮತ್ತು ಪ್ರಸ್ತುತ ಕರ್ತವ್ಯ ನಿರ್ವಹಿಸುತ್ತಿರುವ ಕಛೇರಿಯ ಹೆಸರು ಮತ್ತು ವಿಳಾಸ<br>ಶ್ರೀಮತಿ / ಶ್ರೀ | ಪತ್ರಾಂಕಿತ ವ್ಯವಸ್ಥಾಪಕರು / ಸಹಾಯಕ ನಿರ್ದೇಶಕರು ಹುದ್ದೆಗೆ ಸ್ಥಾನಪನ್ನ ಬಡ್ತಿಯನ್ನು ನೀಡಿ ಸ್ಥಳ ನಿಯುಕ್ತಿಗೊಳಿಸಿರುವ ಹುದ್ದೆ ಮತ್ತು ಕಛೇರಿಯ ವಿಳಾಸ |
|---|---|---|---|
| 1 | 43 | ವಿಜಯಶ್ರೀ ಎನ್ ಶೆಟ್ಟಿ, ಅಧೀಕ್ಷಕರು, ಉಪ ನಿರ್ದೇಶಕರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಶಿವಮೊಗ್ಗ | ಪತ್ರಾಂಕಿತ ವ್ಯವಸ್ಥಾಪಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ತೀರ್ಥಹಳ್ಳಿ, ಶಿವಮೊಗ್ಗ ಜಿಲ್ಲೆ (ಶ್ರೀ ಹೆಚ್. ತಿಮ್ಮಯ್ಯ ಇವರ ವರ್ಗಾವಣೆಯಿಂದ ತೆರವಾದ ಹುದ್ದೆ) |
| 2 | 51 | ಚಂದ್ರಕಲಾ, ಅಧೀಕ್ಷಕರು, ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಬೆಂಗಳೂರು | ಪತ್ರಾಂಕಿತ ವ್ಯವಸ್ಥಾಪಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಮದ್ದೂರು ತಾಲ್ಲೂಕು, ಮಂಡ್ಯ ಜಿಲ್ಲೆ (ಶ್ರೀಮತಿ ಎಂ.ಡಿ. ಶಾರದಾಂಬ ಇವರ ಬಡ್ತಿಯಿಂದ ತೆರವಾದ ಹುದ್ದೆ) |
| 3 | 56 | ಬಿ. ಕೃಷ್ಣಮೂರ್ತಿ ನಾಯ್ಕ, ಅಧೀಕ್ಷಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಬ್ರಹ್ಮಾವರ, ಉಡುಪಿ ತಾಲ್ಲುಕು ಮತ್ತು ಜಿಲ್ಲೆ | ಪತ್ರಾಂಕಿತ ವ್ಯವಸ್ಥಾಪಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಬೈಂದೂರು ತಾಲ್ಲೂಕು, ಉಡುಪಿ ಜಿಲ್ಲೆ (ಶ್ರೀ ಆಂಜನಪ್ಪ ಇವರ ನಿವೃತ್ತಿಯಿಂದ ತೆರವಾದ ಹುದ್ದೆ) |
| 4 | 58 | ಸೀತಾಲಕ್ಷ್ಮೀ, ಅಧೀಕ್ಷಕರು, ಕ್ಷೇತ್ರ ಶಿಕ್ಷಣಾಧಿಕರಿಗಳ ಕಛೇರಿ, ಬೆಂಗಳೂರು ದಕ್ಷಿಣ ವಲಯ–2, ಬೆಂಗಳೂರು | ಪತ್ರಾಂಕಿತ ವ್ಯವಸ್ಥಾಪಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಬಾಗೇಪಲ್ಲಿ ತಾಲ್ಲೂಕು, ಚಿಕ್ಕಬಳ್ಳಾಪುರ ಜಿಲ್ಲೆ (ಶ್ರೀ ಪ್ರಸಾದ್‌ಬಾಬು ಇವರ ನಿಯೋಜನೆಯಿಂದ ತೆರವಾದ ಹುದ್ದೆ) |
| 5 | 82 | ವಾಸುದೇವನ್ .ಎಂ. ಅಧೀಕ್ಷಕರು, ಉಪ ನಿರ್ದೇಶಕರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ದಾವಣಗೆರೆ ಜಿಲ್ಲೆ, ದಾವಣಗೆರೆ | ಪತ್ರಾಂಕಿತ ವ್ಯವಸ್ಥಾಪಕರು, ಉಪ ನಿರ್ದೇಶಕರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಮಧುಗಿರಿ ಶೈಕ್ಷಣಿಕ ಜಿಲ್ಲೆ (ಶ್ರೀ ಹೆಚ್.ಎಸ್. ರಾಜಶೇಖರಯ್ಯ ಇವರ ಬಡ್ತಿಯಿಂದ ತೆರವಾದ ಹುದ್ದೆ) |
| 6 | 83 | ವಿ. ಬಾಲಸುಬ್ರಹ್ಮಣ್ಯ, ಅಧೀಕ್ಷಕರು, ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ, ಚಾಮರಾಜನಗರ | ಪತ್ರಾಂಕಿತ ವ್ಯವಸ್ಥಾಪಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಗುಂಡ್ಲುಪೇಟೆ ತಾಲ್ಲೂಕು, ಚಾಮರಾಜನಗರ ಜಿಲ್ಲೆ (ಶ್ರೀಮತಿ ಶೀಲಾ ಇವರ ವಯೋನಿವೃತ್ತಿಯಿಂದ ತೆರವಾದ ಹುದ್ದೆ) |
| 7 | 84 | ಎನ್. ಗೋಪಾಲಕೃಷ್ಣ, ಅಧೀಕ್ಷಕರು, ಕ್ಷೇತ್ರ ಶಿಕ್ಷಣಾಧಿಕರಿಗಳ ಕಛೇರಿ, ನಂಜನಗೂಡು, ಮೈಸೂರು ಜಿಲ್ಲೆ | ಪತ್ರಾಂಕಿತ ವ್ಯವಸ್ಥಾಪಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಮಡಿಕೇರಿ ತಾಲ್ಲೂಕು, ಕೊಡಗು ಜಿಲ್ಲೆ (ಶ್ರೀಮತಿ ಕೆ.ಆರ್. ಸುಲೋಚನ ಇವರ ವರ್ಗಾವಣೆಯಿಂದ ತೆರವಾದ ಹುದ್ದೆ) |
| 8 | 85 | ಪಿ.ಎನ್. ಶಿವಕುಮಾರ್, ಅಧೀಕ್ಷಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಮಾಲೂರು, ಕೋಲಾರ ಜಿಲ್ಲೆ | ಪತ್ರಾಂಕಿತ ವ್ಯವಸ್ಥಾಪಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಗುಡಿಬಂಡೆ ತಾಲ್ಲೂಕು, ಚಿಕ್ಕಬಳ್ಳಾಪುರ ಜಿಲ್ಲೆ (ಶ್ರೀ ಮಿರ್ಜಾ ಕಲೀಮುಲ್ಲಾ ಇವರ ವರ್ಗಾವಣೆಯಿಂದ ತೆರವಾದ ಹುದ್ದೆ) |

| | | | |
|---|---|---|---|
| 9 | 93 | ಕೆ.ಎನ್. ಸ್ವರ್ಣಲತಾ, ಅಧೀಕ್ಷಕರು, ಕ್ಷೇತ್ರ ಶಿಕ್ಷಣಾಧಿಕರಿಗಳ ಕಛೇರಿ, ಪುತ್ತೂರು ದಕ್ಷಿಣ ಕನ್ನಡ ಜಿಲ್ಲೆ | ಪತ್ರಾಂಕಿತ ವ್ಯವಸ್ಥಾಪಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಸೋಮವಾರಪೇಟೆ ತಾಲ್ಲೂಕು, ಕೊಡಗು ಜಿಲ್ಲೆ ( ಶ್ರೀ ವಿಷ್ಣುಮೂರ್ತಿ ಇವರ ವರ್ಗಾವಣೆಯಿಂದ ತೆರವಾದ ಹುದ್ದೆ) |
| 10 | 95 | ಮುಷೀರ್ ಅಹಮದ್. ಎಂ. ಅಧೀಕ್ಷಕರು, ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು | ಪತ್ರಾಂಕಿತ ವ್ಯವಸ್ಥಾಪಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಅರಕಲಗೂಡು ತಾಲ್ಲೂಕು, ಹಾಸನ ಜಿಲ್ಲೆ (ಶ್ರೀಮತಿ ಲಲಿತಾ .ಬಿ. ಇವರ ವರ್ಗಾವಣೆಯಿಂದ ತೆರವಾಗುವ ಹುದ್ದೆಗೆ) |
| 11 | 143 | ಎ. ರಘು, ಅಧಿಕ್ಷಕರು, ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ, ಉಡುಪಿ | ಪತ್ರಾಂಕಿತ ವ್ಯವಸ್ಥಾಪಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಉಡುಪಿ ವಲಯ, ಉಡುಪಿ ( ಶ್ರೀ ಸುಬ್ರಹ್ಮಣ್ಯ ಕಾಮತ್ ಇವರ ನಿವೃತ್ತಿಯಿಂದ) |
| 12 | 144 | ಯು.ಕೆ. ಸುಂದರ್, ಅಧೀಕ್ಷಕರು, ಉಪ ನಿರ್ದೇಶಕರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ದಕ್ಷಿಣ ಕನ್ನಡ ಜಿಲ್ಲೆ ಮಂಗಳೂರು | ಪತ್ರಾಂಕಿತ ವ್ಯವಸ್ಥಾಪಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಬೆಳ್ತಂಗಡಿ ತಾಲ್ಲೂಕು, ದಕ್ಷಿಣ ಕನ್ನಡ ಜಿಲ್ಲೆ (ಶ್ರೀಮತಿ ವಿನೋದ ಇವರ ವರ್ಗಾವಣೆಯಿಂದ ತೆರವಾದ ಹುದ್ದೆ) |
| 13 | 147 | ಶಾಂತಾ, ಅಧಿಕ್ಷಕರು, ಉಪ ನಿರ್ದೇಶಕರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಉಡುಪಿ ಜಿಲ್ಲೆ, ಉಡುಪಿ | ಪತ್ರಾಂಕಿತ ವ್ಯವಸ್ಥಾಪಕರು, ಉಪ ನಿರ್ದೇಶಕರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಉಡುಪಿ ಜಿಲ್ಲೆ, ಉಡುಪಿ (ಶ್ರೀ ಹೆಚ್.ಎಲ್. ಈಶ್ವರಾಚಾರ್ ಇವರ ನಿವೃತ್ತಿಯಿಂದ ತೆರವಾದ ಹುದ್ದೆ) |

**ಕ್ರಮ ಸಂಖ್ಯೆ : 10 ರಲ್ಲಿನ ನೌಕರರಾದ ಶ್ರೀ ಮುಷೀರ್ ಅಹಮದ್ ಇವರು ಶ್ರೀಮತಿ ಲಲಿತಾ.ಬಿ. ಪತ್ರಾಂಕಿತ ವ್ಯವಸ್ಥಾಪಕರು, ಕ್ಷೇತ್ರ ಶಿಕ್ಷಣಾಧಿಕರಿಗಳ ಕಛೇರಿ, ಅರಕಲಗೂಡು ತಾಲ್ಲೂಕು, ಹಾಸನ ಜಿಲ್ಲೆ ಇವರ ವರ್ಗಾವಣೆಯಿಂದ ಹುದ್ದೆ ತೆರವಾದ ನಂತರ ಬಡ್ತಿ ಹುದ್ದೆಯಲ್ಲಿ ಹಾಜರಾಗತಕ್ಕದ್ದು.**

ಈ ಆದೇಶ ಜಾರಿಯಾದ 15 ದಿನಗಳ ಒಳಗಾಗಿ ಸ್ಥಾನಪನ್ನ ಬಡ್ತಿಯನ್ನು ಹೊಂದಿದ ಅಧೀಕ್ಷಕರುಗಳು ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಕಛೇರಿಯಿಂದ ಬಿಡುಗಡೆಯಾಗಿ, ಬಡ್ತಿಯನ್ನು ನೀಡಿರುವ ಸ್ಥಳದಲ್ಲಿ ಕರ್ತವ್ಯಕ್ಕೆ ಹಾಜರಾಗಲು ಈ ಮೂಲಕ ಆದೇಶಿಸಲಾಗಿದೆ.

(ಕರಡು ಮಾನ್ಯ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ)

(ಹೆಚ್.ಎಸ್. ರಾಮರಾವ್)
ಅಪರ ಆಯುಕ್ತರು(ಆಡಳಿತ) (ಹೆ.ಪ್ರ)

ಇವರಿಗೆ:

1) ಸರ್ಕಾರದ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2) ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು ಇವರಿಗೆ Ink Signed Copy.
3) ಸಂಬಂಧಿಸಿದ ಜಿಲ್ಲಾ ಪಂಚಾಯತಿ ಕಾರ್ಯನಿರ್ವಹಣಾಧಿಕಾರಿಗಳಿಗೆ.
4) ಸಂಬಂಧಿಸಿದ ಕಛೇರಿ ಮುಖ್ಯಸ್ಥರಿಗೆ.
5) ಸಂಬಂಧಿಸಿದ ಅಧೀಕ್ಷಕರುಗಳಿಗೆ.
6) ಕಛೇರಿ ಪ್ರತಿ.